# ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ

ಕೇಂದ್ರ ಕಛೇರಿ : : ಸಾರ್ವಜನಿಕ ಸಂಪರ್ಕ ಇಲಾಖೆ : : ಬೆಂಗಳೂರು–27

ವೆಬ್‌ಸೈಟ್: www.mybmtc.com ಇ–ಮೇಲ್: pro@mybmtc.com ಸ.ವಾಣಿ : 080-22483777


ಸ್ವಾತಂತ್ರ್ಯದ ಅಮೃತ ಮಹೋತ್ಸವ

**ಸಂ**/ಬೆಂಮಸಾಸಂ/ಕೇಕ/ಸಾಸಂಇ/625 /2022-23 ದಿನಾಂಕ: 25.03.2023

## -: ಪತ್ರಿಕಾ ಪ್ರಕಟಣೆ :-

**ವಿಷಯ :-** ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ವಾಸಸ್ಥಳದಿಂದ ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ಪತ್ರದ ಆಧಾರದ ಮೇಲೆ ಪ್ರಯಾಣಿಸಲು ಅನುಮತಿಸಿರುವ ಬಗ್ಗೆ.

***

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಿದ್ಯಾರ್ಥಿ ಸಮುದಾಯದ ಹಿತವನ್ನು ಗಮನದಲ್ಲಿಟ್ಟುಕೊಂಡು ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ಪಾಸುಗಳನ್ನು ವಾಸಸ್ಥಳದಿಂದ ಶಾಲಾ/ಕಾಲೇಜಿಗೆ ಪ್ರಯಾಣಿಸಲು ಅವಕಾಶ ಕಲ್ಪಿಸಿ ವಿತರಣೆ ಮಾಡುತ್ತಿದೆ.

ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಪರೀಕ್ಷೆಯು ಬೇರೆ ಬೇರೆ ಕಾಲೇಜುಗಳಲ್ಲಿ ಇರುವುದರಿಂದ ಸಂಸ್ಥೆಯು ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಕೆಳಕಂಡ ಸೌಲಭ್ಯಗಳನ್ನು ಕಲ್ಪಿಸಿರುತ್ತದೆ.

- ಪರೀಕ್ಷೆಗಳು ನಡೆಯುವ ದಿನಾಂಕಗಳಂದು ಅಂದರೆ **ದಿನಾಂಕ 31.03.2023 ರಿಂದ 15.04.2023 ರವರೆಗೆ** ಪರೀಕ್ಷೆಗೆ ಹಾಜರಾಗುವ ಎಲ್ಲಾ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ **ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ** ಎಸ್.ಎಸ್.ಎಲ್.ಸಿ **ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ,** ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

- ಎಸ್.ಎಸ್.ಎಲ್.ಸಿ ಪರೀಕ್ಷಾ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ ಮಾರ್ಗಗಳಲ್ಲಿ ಕಡ್ಡಾಯವಾಗಿ ಎಲ್ಲಾ ಮಾರ್ಗಗಳನ್ನು, ಸುತ್ತುವಳಿಗಳನ್ನು ಕಾರ್ಯಾಚರಣೆ ಗೊಳಿಸಲಾಗುವುದು.

- ಹೆಚ್ಚುವರಿ ಸುತ್ತುವಳಿಗಳ ಕಾರ್ಯಾಚರಣೆಯ ಅಗತ್ಯತೆ ಕಂಡುಬಂದಲ್ಲಿ ಕಾರ್ಯಾಚರಣೆ ಮಾಡಲಾಗುವುದು.

ಪರೀಕ್ಷಾ ಕೇಂದ್ರಗಳ ಬಳಿ ವಿದ್ಯಾರ್ಥಿಗಳು/ಪೋಷಕರು ಕೋರಿಕೆ ನಿಲುಗಡೆ ಕೋರಿದಲ್ಲಿ, ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳಲಾಗಿದೆ.

ಸಹಿ/-

**ಸಾರ್ವಜನಿಕ ಸಂಪರ್ಕಾಧಿಕಾರಿ**
**ಬೆಂಮಸಾಸಂಸ್ಥೆ**

ಇವರಿಗೆ:
ಸಂಪಾದಕರು/ಪತ್ರಿಕೋದ್ಯಮ
ಈ ಮೇಲಿನ ಪತ್ರಿಕಾ ಪ್ರಕಟಣೆಯನ್ನು ತಮ್ಮ ದಿನಪತ್ರಿಕೆ/ದೃಷ್ಯ/ಎಫ್‌ಎಂ ರೇಡಿಯೊ/ಮುದ್ರಣ ಮಾಧ್ಯಮಗಳಲ್ಲಿ ಪ್ರಕಟಿಸಿ ಸಾರ್ವಜನಿಕ ಪ್ರಯಾಣಿಕರ ಗಮನಕ್ಕೆ ತರಲು ಕೋರಲಾಗಿದೆ.